All India Radio: Bangalore
National Bulletin In Kannada
16.06.2026  19.35 hrs
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

---

ಮುಖ್ಯಾಂಶಗಳು

- ಜಿ-೭ ಶೃಂಗಸಭೆಯಲ್ಲಿ ಭಾಗವಹಿಸಲು ಫ್ರಾನ್ಸ್‌ನ ಎವಿಯನ್ ತಲುಪಿದ ಪ್ರಧಾನಿ ನರೇಂದ್ರ ಮೋದಿ
- ಮುಂಗಾರು ಹಂಗಾಮಿನ ಸಿದ್ಧತೆಗಳ ಕುರಿತು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರಿಂದ ಸಮಗ್ರ ಪರಿಶೀಲನೆ
- ಸಣ್ಣ ಗ್ರಾಮಗಳಲ್ಲಿ ಕೆಮ್ಮಿನ ಸಿರಪ್‌ಗಳ ಮಾರಾಟಕ್ಕೆ ನೀಡಲಾಗಿದ್ದ ವಿನಾಯಿತಿ ಹಿಂಪಡೆದ ಕೇಂದ್ರ ಸರ್ಕಾರ
- ಫಿಫಾ ವಿಶ್ವಕಪ್ ಫುಟ್ಬಾಲ್: 'ಐ' ಗುಂಪಿನ ಪಂದ್ಯದಲ್ಲಿಂದು ಫ್ರಾನ್ಸ್ - ಸೆನೆಗಲ್ ಮುಖಾಮುಖಿ

---

ಪ್ರಧಾನಿ ನರೇಂದ್ರ ಮೋದಿ ಅವರು ಜಿ-೭ ಶೃಂಗಸಭೆಯಲ್ಲಿ ಭಾಗವಹಿಸಲು ಎರಡು ದಿನಗಳ ಭೇಟಿಗಾಗಿ ಫ್ರಾನ್ಸ್‌ನ ಎವಿಯನ್ ನಗರಕ್ಕೆ ಆಗಮಿಸಿದ್ದಾರೆ.

ವಿಶ್ವ ನಾಯಕರೊಂದಿಗೆ ತೊಡಗಿಸಿಕೊಳ್ಳಲು ಮತ್ತು ಪ್ರಮುಖ ಜಾಗತಿಕ ವಿಷಯಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲು ಎದುರು ನೋಡುತ್ತಿದ್ದೇನೆ. ಹೆಚ್ಚು ಸುಸ್ಥಿರ ಮತ್ತು ಸಮೃದ್ಧ ಭೂಮಿಗಾಗಿ ಸಾಮೂಹಿಕ ಪ್ರಯತ್ನಗಳನ್ನು ಮುಂದುವರಿಸಲು ಭಾರತ ಬದ್ಧವಾಗಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಶೃಂಗಸಭೆಯ ಹೊರತಾಗಿ, ಪ್ರಧಾನಿ ನರೇಂದ್ರ ಮೋದಿ ಅವರು ಕೆನಡಾ ಪ್ರಧಾನಿ ಮಾರ್ಕ್ ಕಾರ್ನಿ, ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್ ಮತ್ತು ಯುನೈಟೆಡ್ ಅರಬ್ ಎಮಿರೇಟ್ಸ್ ಅಧ್ಯಕ್ಷ

ಶೇಖ್ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಅವರೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದ್ದಾರೆ. ಇಂದು ರಾತ್ರಿ ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಆಯೋಜಿಸಿರುವ ಭೋಜನಕೂಟದಲ್ಲಿ ಅವರು ಭಾಗವಹಿಸಲಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರು ನಾಳೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ. ವಿವಿಧ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಹಕಾರವನ್ನು ಮತ್ತಷ್ಟು ಬಲಪಡಿಸುವ ಮಾರ್ಗಗಳ ಕುರಿತು ಉಭಯ ನಾಯಕರು ಚರ್ಚಿಸುವ ನಿರೀಕ್ಷೆಯಿದೆ. ಫ್ರಾನ್ಸ್ ಭೇಟಿಯ ಭಾಗವಾಗಿ ನಾಳೆ ಸಂಜೆ ಅವರು ಪ್ಯಾರಿಸ್ ತಲುಪಲಿದ್ದಾರೆ.

---

ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಇಂದು ನವದೆಹಲಿಯಲ್ಲಿ ಉನ್ನತ ಮಟ್ಟದ ಕೃಷಿ ಪರಿಶೀಲನಾ ಸಭೆ ನಡೆಸಿ, ದೇಶಾದ್ಯಂತ ಮುಂಗಾರು-೨೦೨೬ ಹಂಗಾಮಿನ ಸಿದ್ಧತೆಗಳ ಕುರಿತು ಸಮಗ್ರ ಪರಿಶೀಲನೆ ನಡೆಸಿದರು.

ಸಂಭವನೀಯ ಎಲ್ ನಿನೊ ಪರಿಸ್ಥಿತಿಯ ಹಿನ್ನೆಲೆಯಲ್ಲಿ ಹತ್ತಿ ಉತ್ಪಾದನೆ ಹೆಚ್ಚಿಸುವಂತೆ, ಬೇಳೆಕಾಳುಗಳ ಉತ್ಪಾದನೆಯಲ್ಲಿ ಸ್ವಾವಲಂಬನೆ ಸಾಧಿಸುವಂತೆ ಹಾಗೂ ಕಡಿಮೆ ಮಳೆಯ ಜಿಲ್ಲೆಗಳಿಗಾಗಿ ಮುಂಚಿತವಾಗಿ ತುರ್ತು ಕಾರ್ಯಯೋಜನೆಗಳನ್ನು ರೂಪಿಸುವಂತೆ ಅಧಿಕಾರಿಗಳಿಗೆ ಸಚಿವರು ನಿರ್ದೇಶಿಸಿದರು.

ಪ್ರತಿಕೂಲ ಹವಾಮಾನ ಪರಿಸ್ಥಿತಿಗಳಿಂದ ಕೃಷಿ ಮತ್ತು ರೈತರನ್ನು ರಕ್ಷಿಸಲು ಅಗತ್ಯವಿರುವ ಎಲ್ಲ ಕ್ರಮಗಳನ್ನು ಮುಂಚಿತವಾಗಿ ಕೈಗೊಳ್ಳುವ ಕುರಿತು ಸಭೆಯಲ್ಲಿ ಚರ್ಚೆ ನಡೆಯಿತು. ಕಡಿಮೆ ಮಳೆ ಅಥವಾ ಅಸಮರ್ಪಕ ಮಳೆಯ ಸಾಧ್ಯತೆ ಇರುವ ಜಿಲ್ಲೆಗಳಲ್ಲಿ ಪೂರ್ವಸಿದ್ಧತೆಗಳನ್ನು ಸಂಪೂರ್ಣವಾಗಿ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಇಂತಹ ಜಿಲ್ಲೆಗಳನ್ನು ಗುರುತಿಸಿ, ರಾಜ್ಯ ಸರ್ಕಾರಗಳ ಸಹಯೋಗದಲ್ಲಿ ಬೆಳೆವಾರು ತುರ್ತು ಕಾರ್ಯಯೋಜನೆಗಳನ್ನು ಸಿದ್ಧಪಡಿಸಬೇಕು ಎಂದು ಅವರು ಸೂಚಿಸಿದರು.

ನೀರಿನ ಸಂರಕ್ಷಣೆ, ಮಣ್ಣಿನ ತೇವಾಂಶ ನಿರ್ವಹಣೆ, ಅಂತರಬೆಳೆ ಪದ್ಧತಿ ಹಾಗೂ ಪರ್ಯಾಯ ಬೆಳೆ ಮಾದರಿಗಳಿಗೆ ವಿಶೇಷ ಗಮನ ನೀಡಬೇಕು ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ನಿರ್ದೇಶಿಸಿದರು.

---

೨೦೨೭ ರ ಜನಗಣತಿಯ ಹಂತ-೧ ರ ಅಡಿಯಲ್ಲಿ ಮನೆ ಪಟ್ಟಿ ಮತ್ತು ವಸತಿ ಗಣತಿಗಾಗಿ ಕ್ಷೇತ್ರ ಕಾರ್ಯಾಚರಣೆ ಹಿಮಾಚಲ ಪ್ರದೇಶದಲ್ಲಿ ಇಂದು ಪ್ರಾರಂಭವಾಗಿದೆ.

ಗಣತಿದಾರರು ಮನೆ-ಮನೆಗೆ ಭೇಟಿ ನೀಡುವ ಕಾರ್ಯಕ್ರಮ ಮುಂದಿನ ತಿಂಗಳ ೧೫ ರವರೆಗೆ ರಾಜ್ಯದಲ್ಲಿ ಮುಂದುವರಿಯಲಿದೆ ಎಂದು ಕೇಂದ್ರ ಗೃಹ ಸಚಿವಾಲಯ ತಿಳಿಸಿದೆ.

ಕೇರಳ ಮತ್ತು ನಾಗಾಲ್ಯಾಂಡ್‌ನಲ್ಲಿ ಸ್ವಯಂ-ಗಣತಿ ಸೌಲಭ್ಯ ಪ್ರಾರಂಭವಾಗಿದೆ ಮತ್ತು ಈ ತಿಂಗಳ ೩೦ ರವರೆಗೆ ಲಭ್ಯವಿರುತ್ತದೆ. ಈ ರಾಜ್ಯಗಳಲ್ಲಿ ಅನುಗುಣವಾದ ಮನೆ ಪಟ್ಟಿ ಮತ್ತು ವಸತಿ ಗಣತಿ ಕ್ಷೇತ್ರ ಕಾರ್ಯಾಚರಣೆಗಳನ್ನು ಮುಂದಿನ ತಿಂಗಳ ೧ರಿಂದ ಜುಲೈ ೩೦ ರವರೆಗೆ ನಡೆಸಲಾಗುವುದು.

ಆದಾಗ್ಯೂ, ಗುಜರಾತ್, ಜಮ್ಮು ಮತ್ತು ಕಾಶ್ಮೀರ, ಲಡಾಖ್, ಪುದುಚೇರಿ ಮತ್ತು ಉತ್ತರ ಪ್ರದೇಶಗಳಲ್ಲಿ, ಮನೆ-ಮನೆ ಕ್ಷೇತ್ರ ಕಾರ್ಯಾಚರಣೆಗಳು ಪ್ರಸ್ತುತ ನಡೆಯುತ್ತಿವೆ.

ಏತನ್ಮಧ್ಯೆ, ಮಹಾರಾಷ್ಟ್ರ, ಮೇಘಾಲಯ, ರಾಜಸ್ಥಾನ ಮತ್ತು ಜಾರ್ಖಂಡ್ ಜೊತೆಗೆ ದೆಹಲಿ ಮಹಾನಗರ ಪಾಲಿಕೆ ವ್ಯಾಪ್ತಿಗೆ ಬರುವ ಪ್ರದೇಶದಲ್ಲಿ ಮನೆ ಪಟ್ಟಿ ಮತ್ತು ವಸತಿ ಗಣತಿ ಕಾರ್ಯಾಚರಣೆಗಳು ಯಶಸ್ವಿಯಾಗಿ ಪೂರ್ಣಗೊಂಡಿವೆ. ಈ ಕಾರ್ಯಾಚರಣೆಗಳನ್ನು ಮೇ ೧೬ ರಿಂದ ಈ ತಿಂಗಳ ೧೪ ರವರೆಗೆ ನಡೆಸಲಾಯಿತು.

---

ಮಧ್ಯಪ್ರಾಚ್ಯ-ಭಾರತ ಆಳಸಮುದ್ರ ಪೈಪ್‌ಲೈನ್ ಯೋಜನೆಗೆ ಸಂಬಂಧಿಸಿದಂತೆ ಯಾವುದೇ ಪ್ರಸ್ತಾವನೆ ಪ್ರಸ್ತುತ ಸಚಿವಾಲಯದ ಪರಿಗಣನೆಯಲ್ಲಿಲ್ಲ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ಸ್ಪಷ್ಟಪಡಿಸಿದೆ.

ಈ ಕುರಿತು ಪ್ರಕಟಣೆ ಹೊರಡಿಸಿರುವ ಸಚಿವಾಲಯ, ಗುಜರಾತ್ ಅನ್ನು ಒಮನ್ ಹಾಗೂ ಇತರ ಗಲ್ಫ್ ರಾಷ್ಟ್ರಗಳೊಂದಿಗೆ ಸಂಪರ್ಕಿಸುವ 'ಮಧ್ಯಪ್ರಾಚ್ಯ-ಭಾರತ ಆಳಸಮುದ್ರ ಪೈಪ್‌ಲೈನ್' ಯೋಜನೆಯನ್ನು ಕೇಂದ್ರ ಸರ್ಕಾರ ಸಕ್ರಿಯವಾಗಿ ಮುಂದುವರಿಸುತ್ತಿದೆ ಎಂಬರ್ಥದ ಹಲವು ಮಾಧ್ಯಮ ವರದಿಗಳು ಪ್ರಕಟವಾಗಿರುವುದು ಸತ್ಯಕ್ಕೆ ದೂರವಾಗಿದೆ ಎಂದು ಹೇಳಿದೆ.

ಈ ಯೋಜನೆಗೆ ಸಂಬಂಧಿಸಿದಂತೆ ಸಚಿವಾಲಯದ ಯಾವುದೇ ಹಂತದಲ್ಲಿಯೂ ಒಮನ್ ಅಥವಾ ಇತರ ಯಾವುದೇ ಗಲ್ಫ್ ರಾಷ್ಟ್ರಗಳೊಂದಿಗೆ ಸಕ್ರಿಯ ಚರ್ಚೆಗಳು ಅಥವಾ ಮಾತುಕತೆಗಳು ನಡೆಯುತ್ತಿಲ್ಲ ಎಂದು ಸಚಿವಾಲಯ ಸ್ಪಷ್ಟಪಡಿಸಿದೆ.

---

ಸಣ್ಣ ಗ್ರಾಮಗಳಲ್ಲಿ ಕೆಮ್ಮಿನ ಸಿರಪ್‌ಗಳ ಮಾರಾಟಕ್ಕೆ ನೀಡಲಾಗಿದ್ದ ವಿನಾಯಿತಿಯನ್ನು ಹಿಂಪಡೆಯಲಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ.

ಈ ಕುರಿತು ಔಷಧ ನಿಯಮಗಳು, ೧೯೪೫ಕ್ಕೆ ತಿದ್ದುಪಡಿ ಮಾಡಿ ಅಧಿಸೂಚನೆ ಹೊರಡಿಸಿದೆ. ಇನ್ನು ಮುಂದೆ ಸಣ್ಣ ಗ್ರಾಮಗಳಲ್ಲಿಯೂ ಕೆಮ್ಮಿನ ಸಿರಪ್‌ಗಳ ಮಾರಾಟ ಮತ್ತು ವಿತರಣೆ ಕಡ್ಡಾಯವಾಗಿ ಪರವಾನಗಿ ಪಡೆದ ಔಷಧ ಮಳಿಗೆಗಳ ಮೂಲಕವೇ ನಡೆಯಬೇಕಾಗಿದೆ.

---

ದೇಶದ ಅತ್ಯಂತ ದೀರ್ಘಾವಧಿಯ ಚುನಾಯಿತ ಪ್ರಧಾನಿಯಾಗಿ ೧೨ ವರ್ಷಗಳನ್ನು ಪೂರೈಸಿದ ಪ್ರಧಾನಿ ನರೇಂದ್ರ ಮೋದಿ ಅವರು ವಿವಿಧ ಕ್ಷೇತ್ರಗಳಲ್ಲಿ ಗಮನಾರ್ಹ ಅಭಿವೃದ್ಧಿಗೆ ಕಾರಣರಾಗಿದ್ದಾರೆ ಮತ್ತು ಅಭಿವೃದ್ಧಿ ಹೊಂದಿದ ಭಾರತಕ್ಕೆ ಬಲವಾದ ಅಡಿಪಾಯ ಹಾಕಿದ್ದಾರೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ.

ವಿಜಯವಾಡದ ರಾಯನಪಾಡು ರೈಲು ನಿಲ್ದಾಣದಲ್ಲಿ ಇಂದು ಅಭಿವೃದ್ಧಿ ಕಾರ್ಯಗಳ ಪ್ರಗತಿ ಪರಿಶೀಲಿಸಿದ ಅವರು, ದೇಶ ಶೇಕಡ ೧೦೦ ರಷ್ಟು ರೈಲ್ವೆ ವಿದ್ಯುದೀಕರಣದತ್ತ ಸಾಗುತ್ತಿದೆ. ಆಮದು ಮಾಡಿಕೊಂಡ ಡೀಸೆಲ್ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡುತ್ತಿದೆ ಮತ್ತು ಸುಸ್ಥಿರ ಮೂಲಸೌಕರ್ಯವನ್ನು ಬಲಪಡಿಸುತ್ತಿದೆ ಎಂದರು.

ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಅಮರಾವತಿಯನ್ನು ರಾಜಧಾನಿಯಾಗಿ ಘೋಷಿಸಲಾಗಿದೆ ಮತ್ತು ರೈಲು ಮೂಲಸೌಕರ್ಯದ ಮೂಲಕ ಪ್ರಮುಖ ನಗರಗಳೊಂದಿಗೆ ಅದರ ಸಂಪರ್ಕವನ್ನು ಸುಧಾರಿಸಲು ಪ್ರಯತ್ನಗಳು ನಡೆಯುತ್ತಿವೆ ಎಂದು ಅವರು ಹೇಳಿದರು.

---

ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಕಳೆದ ೧೨ ವರ್ಷಗಳಲ್ಲಿ ದೇಶದ ಮೂಲಸೌಕರ್ಯ ವಲಯದಲ್ಲಿ ಆಗಿರುವ ಪರಿವರ್ತನೆಯನ್ನು ಬಿಜೆಪಿ ಅಧ್ಯಕ್ಷ ನಿತಿನ್ ನಬಿನ್ ಶ್ಲಾಘಿಸಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಅವರು, ತ್ವರಿತ ಮತ್ತು ಸಮಗ್ರ ಅಭಿವೃದ್ಧಿಗೆ ದೇಶ ಸಾಕ್ಷಿಯಾಗಿದೆ. ಇದು ಸಂಪರ್ಕವನ್ನು ಬಲಪಡಿಸಿದೆ ಮತ್ತು ಪ್ರದೇಶಗಳಲ್ಲಿ ಹೊಸ ಅವಕಾಶಗಳನ್ನು ಸೃಷ್ಟಿಸಿದೆ ಎಂದು ಹೇಳಿದ್ದಾರೆ.

ರಾಷ್ಟ್ರೀಯ ಹೆದ್ದಾರಿ ಜಾಲ, ೯೧ ಸಾವಿರ ಕಿಲೋಮೀಟರ್‌ಗಳಿಂದ ೧ ಲಕ್ಷ ನಲವತ್ತಾರು ಸಾವಿರ ಕಿಲೋಮೀಟರ್‌ಗಳಿಗೆ ವಿಸ್ತರಿಸಿದೆ. ಮೆಟ್ರೋ ರೈಲು ಜಾಲ ಸುಮಾರು ೨ ನೂರ ೫೦ ಕಿಲೋಮೀಟರ್‌ಗಳಿಂದ ಸುಮಾರು ೧೨ ನೂರು ಕಿಲೋಮೀಟರ್‌ಗಳಿಗೆ ಬೆಳೆದಿದೆ. ಈ ಅವಧಿಯಲ್ಲಿ ದೇಶದಲ್ಲಿ ವಿಮಾನ ನಿಲ್ದಾಣಗಳ ಸಂಖ್ಯೆಯೂ ದ್ವಿಗುಣಗೊಂಡಿದೆ ಎಂದು ಅವರು ಮಾಹಿತಿ ನೀಡಿದರು.

ಸುಧಾರಿತ ರಸ್ತೆ, ರೈಲು ಮತ್ತು ವಾಯು ಸಂಪರ್ಕವು ದೇಶದ ಪ್ರತಿಯೊಂದು ಭಾಗವನ್ನು ಸಂಪರ್ಕಿಸುತ್ತಿದೆ ಮತ್ತು ಅಭಿವೃದ್ಧಿಗೆ ಹೊಸ ಆವೇಗವನ್ನು ಒದಗಿಸುತ್ತಿದೆ. ಮೂಲಸೌಕರ್ಯವು ಸಂಪರ್ಕವನ್ನು ಹೆಚ್ಚಿಸುವುದಲ್ಲದೆ, ಅಭಿವೃದ್ಧಿ ಹೊಂದಿದ ಭಾರತಕ್ಕೆ ಬಲವಾದ ಅಡಿಪಾಯವನ್ನು ಹಾಕುತ್ತಿದೆ ಎಂದು ಅವರು ಪ್ರತಿಪಾದಿಸಿದರು.

---

ಯುಪಿಎಸ್‌ಸಿ ನಾಗರಿಕ ಸೇವೆಗಳ ಪರೀಕ್ಷೆ-೨೦೨೬ರ ಪ್ರಶ್ನೆಪತ್ರಿಕೆ ಸೋರಿಕೆಯಾಗಿದೆ ಎಂದು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಹಲವು ಪೋಸ್ಟ್‌ಗಳನ್ನು ಕೇಂದ್ರ ಸರ್ಕಾರ ತಳ್ಳಿಹಾಕಿದೆ.

ಕೇಂದ್ರ ಸರ್ಕಾರದ ವಾರ್ತಾ ಶಾಖೆಯ ಸತ್ಯ ಶೋಧನಾ ಘಟಕ, ಈ ಆರೋಪಗಳು ಸುಳ್ಳು ಎಂದು ಸ್ಪಷ್ಟಪಡಿಸಿದೆ. ಯುಪಿಎಸ್‌ಸಿ ಪರೀಕ್ಷೆಯ ಪ್ರಶ್ನೆಪತ್ರಿಕೆಗಳನ್ನು ದೇಶದ ವಿವಿಧ ಭಾಗಗಳಿಂದ ಆಯ್ಕೆ ಮಾಡಲಾದ ಸಂಬಂಧಿತ ವಿಷಯಗಳ ತಜ್ಞರು ಸಿದ್ಧಪಡಿಸುತ್ತಾರೆ ಎಂದು ಘಟಕ ತಿಳಿಸಿದೆ.

ಇಂತಹ ಮಾಹಿತಿಗಳನ್ನು ಅಧಿಕೃತ ಮೂಲಗಳಿಂದ ಮಾತ್ರ ಪರಿಶೀಲಿಸಬೇಕು ಎಂದು ಪಿಐಬಿ ಸಾರ್ವಜನಿಕರಿಗೆ ಮನವಿ ಮಾಡಿದೆ. ಅಲ್ಲದೆ, ದಾರಿತಪ್ಪಿಸುವ ಮತ್ತು ದೃಢೀಕರಿಸದ ಇಂತಹ ಸುಳ್ಳು ಮಾಹಿತಿಗಳನ್ನು ಹಂಚಿಕೊಳ್ಳುವುದನ್ನು ತಪ್ಪಿಸುವಂತೆ ಜನರಿಗೆ ಕೋರಿದೆ.

---

ಈಸ್ಟ್ ರುದರ್‌ಫೋರ್ಡ್‌ನಲ್ಲಿ ಇಂದು ನಡೆಯಲಿರುವ ಫಿಫಾ ವಿಶ್ವಕಪ್ ಫುಟ್ಬಾಲ್ ಪಂದ್ಯಾವಳಿಯ 'ಐ' ಗುಂಪಿನ ಪಂದ್ಯದಲ್ಲಿ ಫ್ರಾನ್ಸ್ ಮತ್ತು ಸೆನೆಗಲ್ ತಂಡಗಳು ಮುಖಾಮುಖಿಯಾಗಲಿವೆ. ಭಾರತೀಯ ಕಾಲಮಾನ ಮಧ್ಯರಾತ್ರಿ ೧೨.೩೦ಕ್ಕೆ ಪಂದ್ಯ ಆರಂಭವಾಗಲಿದೆ.

ಇನ್ನೊಂದು ಪಂದ್ಯದಲ್ಲಿ ಅಮೆರಿಕಾದ ಬೋಸ್ಟನ್ ಕ್ರೀಡಾಂಗಣದಲ್ಲಿ ನಡೆಯುವ 'ಐ' ಗುಂಪಿನ ಪಂದ್ಯದಲ್ಲಿ ನಾರ್ವೆ ತಂಡ, ಇರಾಕ್ ತಂಡವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ನಾಳೆ ಮುಂಜಾನೆ ೩ ಗಂಟೆ ೩೦ ನಿಮಿಷಕ್ಕೆ ಆರಂಭವಾಗಲಿದೆ.

__________ ಮುಕ್ತಾಯ __________